ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 23/3/2021

# ಸದನದಲ್ಲಿ ಸೀಡಿ ಕದನ

## ಜಾರಕಿಹೊಳಿ ವಿರುದ್ಧ ಅತ್ಯಾಚಾರ ಕೇಸ್‌ಗೆ ಕಾಂಗ್ರೆಸ್ ಬಿಗಿಪಟ್ಟು
## ಕೋರ್ಟ್ ಮೊರೆ ಹೋದ 6 ಸಚಿವರ ರಾಜೀನಾಮೆಗೆ ಒತ್ತಾಯ
## ನಿಲುವಳಿ ಮಂಡಿಸಿದ ಸಿದ್ದು | ರಾಜೀನಾಮೆ ಇಲ್ಲವೆಂದ ಸರ್ಕಾರ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ 23/3/21

ರಾಜ್ಯ ರಾಜಕಾರಣದಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿರುವ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಿ.ಡಿ. ಪ್ರಕರಣ ಕೊನೆಗೂ ಸದನದಲ್ಲಿ ಪ್ರಸ್ತಾಪವಾಗಿದ್ದು, ಈ ಕುರಿತು ಕಾಂಗ್ರೆಸ್ ಮಂಡಿಸಿದ ನಿಲುವಳಿ ಸೂಚನೆಯಿಂದ ಸೋಮವಾರ ಸದನದಲ್ಲಿ ಕೋಲಾಹಲ ಉಂಟಾಯಿತು.



ಸಿ.ಡಿ. ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ವಹಿಸಬೇಕು. ರಮೇಶ್ ಜಾರಕಿಹೊಳಿ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಬೇಕು. ನ್ಯಾಯಾಲಯದಿಂದ ತಡೆಯಾಜ್ಞೆ ತಂದಿರುವ ಆರು ಮಂದಿ ಸಚಿವರು ರಾಜೀನಾಮೆ ನೀಡಿ ತನಿಖೆ ಎದುರಿಸಬೇಕು ಎಂದು ಕಾಂಗ್ರೆಸ್ ಬಲವಾಗಿ ಒತ್ತಾಯಿಸಿತು. ಕಾಂಗ್ರೆಸ್‌ನ ಈ ಮೂರೂ ಪ್ರಮುಖ ಆಗ್ರಹಗಳಿಗೆ ಸರ್ಕಾರ ಸೊಪ್ಪು ಹಾಕದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸದಸ್ಯರು ಸದನದ ಬಾವಿಗಿಳಿದು ಧರಣಿ ನಡೆಸಿದ ಪರಿಣಾಮ ಕಲಾಪವನ್ನು ಮಂಗಳವಾರಕ್ಕೆ ಮುಂದೂಡಲಾಯಿತು.

**ನಿಲುವಳಿ ಸೂಚನೆ:** ಸಿ.ಡಿ. ಪ್ರಕರಣದ ಬಗ್ಗೆ ನಿಲುವಳಿ ಸೂಚನೆ ಮಂಡಿಸಿದ ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸದಸ್ಯರು, ಸಿ.ಡಿ. ಪ್ರಕರಣದ ತನಿಖೆಯಲ್ಲಿನ ವೈಫಲ್ಯಗಳನ್ನು ಎಳೆ-ಎಳೆಯಾಗಿ ಬಿಡಿಸಿಟ್ಟರು.

ಯುವತಿಗೆ ಜೀವಭಯ ಇದ್ದರೂ ಈವರೆಗೂ ಆಕೆಯನ್ನು ಪತ್ತೆಹಚ್ಚಿ ರಕ್ಷಣೆ ನೀಡಲೂ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ↘ 9

# ವಿಡಿಯೋ ಅಸಲಿ ಅಂತ ಸಾಬೀತಾದ್ರೆ ರೇಪ್ ಕೇಸ್

## ರಕ್ಷಣೆ ನೀಡಲೆಂದೇ ಯುವತಿಯನ್ನು ಹುಡುಕುತ್ತಿದ್ದೇವೆ
## ಯುವತಿ ಪತ್ತೆಗೆ 22 ಅಧಿಕಾರಿಗಳ ತಂಡ: ಬೊಮ್ಮಾಯಿ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಮಾಜಿ ಸಚಿವರ ವಿರುದ್ಧದ ಸಿ.ಡಿ. ಪ್ರಕರಣದಲ್ಲಿ ಸತ್ಯ ಹೊರಗೆಬರಬೇಕುಎಂಬಉದ್ದೇಶದಿಂದಲೇ ಎಸ್‌ಐಟಿ ರಚಿಸಿದ್ದೇವೆ. ರಮೇಶ್ ಜಾರಕಿಹೊಳಿ ಅವರ ಪಾತ್ರವನ್ನೂ ತನಿಖೆ ಮಾಡುತ್ತಿದ್ದು, ತನ್ನನ್ನು ಬಳಸಿಕೊಂಡಿದ್ದಾರೆ ಎಂದಿರುವ ಯುವತಿಯ ವಿಡಿಯೋ ಅಸಲಿ ಎಂಬುದು ಸಾಬೀತಾದರೆ ಕೂಡಲೇ ಅತ್ಯಾಚಾರ ಆರೋಪದಡಿ ಪ್ರಕರಣ ದಾಖಲಿಸುತ್ತೇವೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಸ್ಪಷ್ಟಪಡಿಸಿದ್ದಾರೆ.

ವಿಧಾನಸಭೆಯಲ್ಲಿ ಕಾಂಗ್ರೆಸ್‌ನ ಸಿ.ಡಿ. ಪ್ರಸ್ತಾಪಕ್ಕೆ ಸರ್ಕಾರದ ಪರ ಉತ್ತರ ನೀಡಿದ ಅವರು, ಈಗಾಗಲೇ ಪ್ರಕರಣದ ಬಗ್ಗೆ ಮೂರು ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ನಿಷ್ಪಕ್ಷಪಾತವಾಗಿ ತನಿಖೆ ನಡೆಸಲು ಎಸ್‌ಐಟಿ ರಚಿಸಿ ಎಲ್ಲಾ ಎಫ್‌ಐಆರ್‌ಗಳನ್ನು ಎಸ್‌ಐಟಿಗೆ ರವಾನಿಸಿದ್ದೇವೆ. ↘ 9



**ಯುವತಿ ಹಾಗೂ ತಂದೆ ಹೇಳಿಕೆಗೆ ವ್ಯತ್ಯಾಸಗಳಿವೆ. ರಮೇಶ್ ಜಾರಕಿಹೊಳಿ ಅವರೇ ದೃಶ್ಯ ಬಿಡುಗಡೆ ಮಾಡಿದ್ದಾರೆಂದು ಯುವತಿ ಹೇಳಿದ್ದಾಳೆ. ಅವರೇ ಅವರ ವಿಡಿಯೋ ಬಿಡುಗಡೆ ಮಾಡಿ ಸಚಿವ ಸ್ಥಾನ ಕಳೆದುಕೊಳ್ತಾರಾ?**

**• ಬಸವರಾಜ ಬೊಮ್ಮಾಯಿ**

## ನಮ್ಮ ವಿರುದ್ಧದ ಷಡ್ಯಂತ್ರದಿಂದ ಪಾರಾಗಲು ಕೋರ್ಟ್‌ಗೆ ಹೋಗಿದ್ದರಲ್ಲಿ ತಪ್ಪೇನಿದೆ: ಸಚಿವರ ಸಮರ್ಥನೆ ↘ 7

17

# ಸದನದಲ್ಲಿ ಸೀಡಿ ಕದನ

◄ ಮೊದಲ ಪುಟದಿಂದ 23/3/21

ಹೀಗಾಗಿ ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಕುರಿತು ಸರ್ಕಾರದ ಪರ ಉತ್ತರ ನೀಡಿದ ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ಕಾಂಗ್ರೆಸ್ ನಾಯಕರ ಈ ಬೇಡಿಕೆಗಳನ್ನು ಸಾರಾಸಗಟಾಗಿ ನಿರಾಕರಿಸಿದರು. ಅಲ್ಲದೆ, ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ನಡೆದಿದ್ದ ಮೇಟಿ ಪ್ರಕರಣವನ್ನು ಪ್ರಸ್ತಾಪಿಸಿ ಅತ್ಯಾಚಾರ ಪ್ರಕರಣ ದಾಖಲಿಸಬೇಕು ಎಂದು ಕೋರುವ ಹಕ್ಕು ಕಾಂಗ್ರೆಸ್ಸಿಗರಿಗೆ ಎಂದು ಟೀಕಿಸಿದರು. ಈ ಉತ್ತರದಿಂದ ಕ್ರುದ್ಧರಾದ ಕಾಂಗ್ರೆಸ್ ಸದನದಬಾವಿಗಿಳಿದುಧರಣಿಆರಂಭಿಸಿದರು. ಈ ಸಂದರ್ಭದಲ್ಲಿ ಉಭಯ ಪಕ್ಷಗಳ ಸದಸ್ಯರು ವಾಗ್ವಾದದಲ್ಲಿ ತೊಡಗಿದ್ದರಿಂದ ಭಾರಿ ಗದ್ದಲ ಉಂಟಾಯಿತು. ಹೀಗಾಗಿ ಸ್ಪೀಕರ್ ಸದನವನ್ನು ಮಂಗಳವಾರಕ್ಕೆ ಮುಂದೂಡಿದರು.

**ಕಾಂಗ್ರೆಸ್ ಆರೋಪವೇನು?:** ಮೊದಲಿಗೆ ವಿಷಯ ಪ್ರಸ್ತಾಪಿಸಿದ ಸಿದ್ದರಾಮಯ್ಯ ಅವರು, ರಮೇಶ್ ಜಾರಕಿಹೊಳಿ ಪ್ರಕರಣದಿಂದ ರಾಜ್ಯದ ಮಾನ-ಮರ್ಯಾದೆ ರಾಷ್ಟ್ರೀಯ ಮಟ್ಟದಲ್ಲಿ ಹರಾಜಾಗಿದೆ. ನನ್ನ ವಿರುದ್ಧ ಷಡ್ಯಂತ್ರ ನಡೆಸಲಾಗಿದೆಎಂದುರಮೇಶ್ ಜಾರಕಿಹೊಳಿ ಆರೋಪಿಸಿದ್ದಾರೆ. ಆದರೆ, ಸಿ.ಡಿ. ಪ್ರಕರಣದ ಸಂತ್ರಸ್ತೆ ಬಿಡುಗಡೆ ಮಾಡಿರುವ ವಿಡಿಯೋ ಹೇಳಿಕೆಯಲ್ಲಿ ರಮೇಶ್ ಜಾರಕಿಹೊಳಿ ಕೆಲಸ ಕೊಡಿಸುವುದಾಗಿ ತನ್ನನ್ನು ಬಳಸಿಕೊಂಡಿರುವುದಾಗಿ ಸ್ಪಷ್ಟವಾಗಿ ಹೇಳಿದ್ದಾರೆ. ಇದು ಐಪಿಸಿ 376 ಅಡಿ ಅತ್ಯಾಚಾರ ಆರೋಪ. ಹೀಗಾಗಿ ಕೂಡಲೇ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಎಸ್ಐಟಿ ರಚನೆ ವೇಳೆ ಗೃಹ ಸಚಿವರು



ಯಾವ ರೀತಿ ತನಿಖೆ ನಡೆಸಬೇಕು ಎಂಬ ನಿಯಮಾವಳಿ ಸೂಚಿಸಿಲ್ಲ. ಬದಲಿಗೆ ಸಿ.ಡಿ. ಷಡ್ಯಂತ್ರ ವಿರುದ್ಧ ತನಿಖೆ ನಡೆಸುವಂತೆ ಹೇಳಿದ್ದಾರೆ. ಹೀಗಾಗಿ ಎಸ್ಐಟಿಯು ರಮೇಶ್ ಜಾರಕಿಹೊಳಿ ವಿರುದ್ಧ ನಡೆದಿರಬಹುದಾದ ಷಡ್ಯಂತ್ರದ ತನಿಖೆಯಲ್ಲಿ ತೊಡಗಿದೆಯೇ ಹೊರತು ಸಂತ್ರಸ್ತೆಗೆ ನ್ಯಾಯ ದೊರಕಿಸಿಕೊಡುವ ಪ್ರಯತ್ನ ಮಾಡಿಲ್ಲ, ಹೀಗಾಗಿ ನ್ಯಾಯ ದೊರೆಯುವುದಿಲ್ಲ ಎಂದು ಸಂತ್ರಸ್ತೆಯೂ ಪ್ರಾಣಭೀತಿಯಿದೆ ಎಂದು ಹೇಳಿಕೆ ನೀಡಿದ್ದಾಳೆ. ಈವರೆಗೂ ಸಂತ್ರಸ್ತೆಯನ್ನು ಪತ್ತೆ ಹಚ್ಚಿ ಭದ್ರತೆ ನೀಡಲು ಸರ್ಕಾರಕ್ಕೆ ಆಗಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

**ಆರು ಸಚಿವರು ರಾಜೀನಾಮೆ ನೀಡಲಿ:** ಇನ್ನು ಡಾ.ಕೆ.ಸುಧಾಕರ್, ಬಿ.ಸಿ.ಪಾಟೀಲ್, ನಾರಾಯಣಗೌಡ, ಎಸ್.ಟಿ. ಸೋಮಶೇಖರ್, ಅರೆಬೈಲು ಶಿವರಾಮ್ ಹೆಬ್ಬಾರ್ ಮತ್ತು ಬೈರತಿ ಬಸವರಾಜು ಯಾವುದೇ ಆರೋಪ ಇಲ್ಲದಿದ್ದರೂ ತಮ್ಮ ವಿರುದ್ಧ ಯಾವುದೇ ಮಾನಹಾನಿ ಸುದ್ದಿಗಳ ಪ್ರಸಾರಮಾಡದಂತೆಮಧ್ಯಂತರತಡೆಯಾಜ್ಞೆ ತಂದಿದ್ದಾರೆ. ಇವರಿಗೆ ಅಧಿಕಾರದಲ್ಲಿ ಮುಂದುವರೆಯಲು ನೈತಿಕತೆ ಇಲ್ಲ. ಹೀಗಾಗಿ ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

# ಅಸಲಿ ಅಂತಾದರೆ ಕೇಸ್

◄ ಮೊದಲ ಪುಟದಿಂದ

ಪ್ರಕರಣದಲ್ಲಿ ಯಾರ್‍ಯಾರು ಭಾಗಿಯಾಗಿದ್ದಾರೋ ಎಲ್ಲರ ವಿರುದ್ಧವೂ ಕ್ರಮವಾಗಲಿದೆ. ಯುವತಿಯ ಹೇಳಿಕೆ ವಿಡಿಯೋವನ್ನು ಸೈಬರ್ ತನಿಖೆಗೆ ಕಳುಹಿಸಿದ್ದೇವೆ. ವಿಡಿಯೋ ಅಸಲಿ ಎಂದಾದರೆ ಐಪಿಸಿ ಸೆಕ್ಷನ್ 376 ಅಡಿ ಪ್ರಕರಣ ದಾಖಲಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ವಿಡಿಯೋದಲ್ಲಿ ಯುವತಿ ರಕ್ಷಣೆ ಬೇಕು ಎಂದಿದ್ದಾಳೆ. ಯುವತಿಗೆ ರಕ್ಷಣೆ ಕೊಡುವ ಉದ್ದೇಶದಿಂದ ಯುವತಿಗಾಗಿ ಹುಡುಕುತ್ತಿದ್ದೇವೆ. 20 ದಿನಗಳಾದರೂ ಯುವತಿ ಪತ್ತೆಯಾಗಿಲ್ಲ. ಯುವತಿ ಪತ್ತೆಗೆ 22 ಅಧಿಕಾರಿಗಳ 5 ತಂಡ ರಚಿಸಿದ್ದೇವೆ. ಯುವತಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಓಡುತ್ತಿದ್ದಾಳೆ. ದೆಹಲಿ, ಬೆಳಗಾವಿ, ಗೋವಾ, ಭೋಪಾಲ್ ಎಲ್ಲಾ ಕಡೆ ಹುಡುಕಿದ್ದೇವೆ. ಒಂದು ಕಡೆ ನಿಲ್ಲದೆ ತಪ್ಪಿಸಿಕೊಂಡು ಹೋಗುತ್ತಿದ್ದಾಳೆ. ಪತ್ತೆಗೆ ಪ್ರಯತ್ನ ನಡೆದಿದೆ ಎಂದರು. ಇದೇ ವೇಳೆ ವಿಡಿಯೋದಲ್ಲಿ ತಾನು 3 ಬಾರಿ ಆತ್ಮಹತ್ಯೆ ಯತ್ನ ಹಾಗೂ ತನ್ನ ತಂದೆ, ತಾಯಿ ಎರಡು ಬಾರಿ ಆತ್ಮಹತ್ಯೆ ಯತ್ನ ಮಾಡಿದ್ದಾಗಿ ಹೇಳಿದ್ದಾಳೆ. ಅವರ ವಿಡಿಯೋವನ್ನು ಅವರೇ ಬಿಡುಗಡೆ ಮಾಡಿ ಸಚಿವ ಸ್ಥಾನ ಕಳೆದುಕೊಳ್ಳಲು ಸಾಧ್ಯವೇ ಎಂದೂ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸಿದ್ದರಾಮಯ್ಯ, ತನ್ನನ್ನು ಬಳಸಿಕೊಂಡಿದ್ದಾರೆ ಎಂದು ಹೇಳಿಕೆಯಲ್ಲೇ ಸ್ಪಷ್ಟವಾಗಿ ಹೇಳಿದ್ದಾಳೆ. ಹೇಳಿಕೆ ಆಧರಿಸಿ ಎಫ್ಐಆರ್ ದಾಖಲಿಸಲೂ ಅಪರಾಧ ಸಾಬೀತಾಗಬೇಕೇ? ಎಂದು ಪ್ರಶ್ನಿಸಿದರು. ಇದಕ್ಕೆ ಬಸವರಾಜ ಬೊಮ್ಮಾಯಿ, ಹಾಗಾದರೆ ನೀವು ಎಚ್.ವೈ. ಮೇಟಿ ವಿರುದ್ಧ ಆರೋಪ ಬಂದಾಗ 376 ಅಡಿ ಅತ್ಯಾಚಾರ ಪ್ರಕರಣ ಏಕೆ ದಾಖಲಿಸಿಲ್ಲ? ಸಂತ್ರಸ್ತೆ ದೂರು ಸಹ ನೀಡಿದ್ದರೂ ಏಕೆ ಕ್ರಮ ಕೈಗೊಂಡಿಲ್ಲ ಎಂದು ಮರು ಪ್ರಶ್ನಿಸಿ, ಸತ್ಯ ಹೊರಗೆ ಬರಬೇಕು ಎಂಬ ಕಾರಣಕ್ಕಾಗಿಯೇ ಎಸ್ಐಟಿ ರಚಿಸಿದ್ದೇವೆ ಎಂದು ಹೇಳಿದರು.